# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ದುಬೈನಲ್ಲಿ 2019ನೇ ಸಾಲಿನ ಬಸವ ಜಯಂತಿ ಆಚರಣೆಗೆ ಅನುದಾನ ಬಿಡುಗಡೆ ಮಾಡಲು 2019-20ನೇ ಆರ್ಥಿಕ ಸಾಲಿನಲ್ಲಿ ಮಂಜೂರಾಗಿದ್ದ ಧನಸಹಾಯದ ಮೊತ್ತಕ್ಕೆ ನವೀಕರಣ ಆದೇಶ ಹೊರಡಿಸುವ ಕುರಿತು.

ಓದಲಾಗಿದೆ:
1) ಸರ್ಕಾರದ ಆದೇಶ ಸಂ:ಕಸಂವಾ 10 ಕಸಧ 2019, ದಿ:07-06-2019.
2) ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ರವರ ಪತ್ರ ಸಂಖ್ಯೆ: DKC/40011/01/2019, ದಿ:24-08-2020.

ಪ್ರಸ್ತಾವನೆ:

ಮೇಲೆ (1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ, ದುಬೈನಲ್ಲಿ 2019ನೇ ಸಾಲಿನ ಬಸವ ಜಯಂತಿ ಆಚರಣೆಗೆ ಅನುದಾನ ಬಿಡುಗಡೆ ರೂ.10.00 ಲಕ್ಷಗಳ ಅನುದಾನವನ್ನು ಮಂಜೂರು ಮಾಡಲಾಗಿದೆ.

ರಂಗ ಸಮಾಜ(ರಿ), ಧಾರವಾಡ ಸಂಸ್ಥೆಯವರು ದುಬೈನಲ್ಲಿ ಬಸವ ಸಮಿತಿಯವರ ಸಹಯೋಗದಲ್ಲಿ ಆಯೋಜಿಸಿದ್ದ ಬಸವ ಜಯಂತಿ ಕಾರ್ಯಕ್ರಮದ ವೆಚ್ಚ ಭರಿಸಲು ರೂ.10.00 ಲಕ್ಷಗಳನ್ನು, ಅನುದಾನ ಲಭ್ಯತೆ ಇಲ್ಲದ ಕಾರಣ ಬಿಡುಗಡೆಯಾಗಿರುವುದಿಲ್ಲ, 2020-21ನೇ ಸಾಲಿನ ಕ್ರಿಯಾ ಯೋಜನೆಯಲ್ಲಿ ಸದರಿ ಅನುದಾನದ ಬಿಡುಗಡೆಗೆ ಅವಕಾಶ ಮಾಡಿಕೊಂಡಿರುವುದಿಲ್ಲವಾದ್ದರಿಂದ ಹೆಚ್ಚುವರಿ ಅನುದಾನ ಒದಗಿಸಿ, ನವೀಕರಣ ಆದೇಶ ಹೊರಡಿಸುವಂತೆ ಮೇಲೆ ಓದಲಾದ (2)ರ ಪತ್ರದಲ್ಲಿ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಕಸಂವಾ 10 ಕಸಧ 2019, ಬೆಂಗಳೂರು, ದಿನಾಂಕ:01-09-2020

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ದುಬೈನಲ್ಲಿ 2019ನೇ ಸಾಲಿನ ಬಸವ ಜಯಂತಿ ಆಚರಣೆಗೆ ರೂ.10.00 ಲಕ್ಷ (ರೂಪಾಯಿ ಹತ್ತು ಲಕ್ಷ ಮಾತ್ರ) ಗಳನ್ನು ಬಿಡುಗಡೆ ಮಾಡಲಾಗಿದ್ದ ಮೇಲೆ ಓದಲಾದ (1)ರ ಸರ್ಕಾರದ ಆದೇಶವನ್ನು 2020-21ನೇ ಸಾಲಿಗೆ ನವೀಕರಿಸಿ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು, ಇವರ ಮುಖಾಂತರ ಸಂಬಂಧಿಸಿದವರಿಗೆ ಬಿಡುಗಡೆ ಮಾಡಲು ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ ಮಂಜೂರಾತಿ ನೀಡಿದೆ.

1) ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಹಣ ಮಂಜೂರು ಮಾಡಿದ್ದು, ಅದೇ ಉದ್ದೇಶಕ್ಕೆ ಬಳಸತಕ್ಕದ್ದು.
2) ಮಂಜೂರು ಮಾಡಿದ ಹಣ ಸಮರ್ಪಕವಾಗಿ ಬಳಕೆಯಾದ ಬಗ್ಗೆ ಲೆಕ್ಕಪರಿಶೋಧಕರಿಂದ ದೃಢೀಕರಿಸಿದ ಲೆಕ್ಕಪಟ್ಟಿ ಹಾಗೂ ಹಣಬಳಕೆ ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸುವುದು.
3) ಕಾರ್ಯಕ್ರಮ ನಡೆದ ಬಗ್ಗೆ ನಿಯಮಾನುಸಾರ ಎಲ್ಲಾ ದಾಖಲೆಗಳನ್ನು ಪಡೆದು ಹಣ ಬಿಡುಗಡೆ ಮಾಡುವುದು.

2) ಈ ವೆಚ್ಚವನ್ನು 2020-21ನೇ ಸಾಲಿನ ಲೆಕ್ಕಶೀರ್ಷಿಕೆ 2205-00-102-4-31-059 (ಯೋಜನೆ) ಅಡಿ ಭರಿಸತಕ್ಕದ್ದು.

3) ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 02 ಟಿಎಫ್‌ಪಿ 2020, ದಿನಾಂಕ: 03-05-2020ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಹೆಚ್.ಕೆ.ಸುರೇಶ್‌ಬಾಬು)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)
ಕನ್ನಡ, ಸಂಸ್ಕೃತಿ ಹಾಗೂ ಇಲಾಖೆ.
1/9/20 (ಸಂಸ್ಕೃತಿ ಶಾಖೆ)

ಗೆ:

1) ಮಹಾಲೇಖಪಾಲರು (ಎ&ಇ), (ಜಿ&ಎಸ್ ಎಸ್ ಎ), (ಇ & ಆರ್ ಎಸ್ ಎ), ಕರ್ನಾಟಕ ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.
2) ನಿರ್ದೇಶಕರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಭವನ, ಬೆಂಗಳೂರು.
3) ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಆಪ್ತ ಕಾರ್ಯದರ್ಶಿ ವಿಧಾನ ಸೌಧ, ಬೆಂಗಳೂರು.
4) ಖಜಾನೆ ಅಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
5) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.